ಪಿ.ಡಬ್ಲ್ಯೂ :1

ದಿನಾಂಕ :04-04-2025 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲುಃ **1** ನೇ ಮಧ್ಯಂತರ ಅರ್ಜಿಯ ಮೇಲೆ ಎದುರುದಾರರ ಪರ ವಕೀಲರಿಂದಃ

ಓ ಎಸ್ ನಂ . 17-2018 ರ ದಾವೆಯಲ್ಲಿ ನನ್ನ ಸಹೋದರರಿಗೆ ಭಾಗಾಂಶ ನೀಡಬೇಕು ರಾಜಿ ಮಾಡಿಕೊಳ್ಳಿ ಎಂದು ನ್ಯಾಯಾಲಯವು ತಿಳಿಸಿದ ಕಾರಣ ಭಾಗಾಂಶ ನೀಡಬೇಕಾಗುತ್ತದೆ ಎಂಬ ಕಾರಣಕ್ಕೆ ನ್ಯಾಯಾಲಯಕ್ಕೆ ಹಾಜರಾಗದಂತೆ ಉಳಿದುಕೊಂಡಿದ್ದೆ ಎಂದರೆ ಸರಿಯಲ್ಲ. ವಾದಿಗೆ ದಾವೆಯನ್ನು ಹಿಂಪಡೆಯಬೇಕೆಂದು ಒತ್ತಾಯ ನೀಡುತ್ತಿದ್ದೆ ಎಂದರೆ ಸರಿಯಲ್ಲ. ಕೋವಿಡ್ -19 ಲಾಕ್‌ಡೌನ್ ಗೆ ಮೊದಲೇ ಓ ಎಸ್ ನಂ . 17/2018 ರ ದಾವೆ ಡಿಕ್ರಿಯಾಗಿತ್ತು . ಸುಳ್ಳು ವಿವರಗಳನ್ನು ಮುಖ್ಯ ವಿಚಾರಣೆಯಲ್ಲಿ ತಿಳಿಸಿದ್ದೇನೆ ಎಂದರೆ ಸರಿಯಲ್ಲ. ನನ್ನ ಪತ್ನಿ ಮತ್ತು ಮಗಳಿಗೆ ಅನಾರೋಗ್ಯವಿತ್ತು ಎಂದು ಸುಳ್ಳು ಹೇಳಿದ್ದೇನೆ, ದಾಖಲೆಗಳನ್ನು ಸೃಷ್ಟಿಸಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ . ಈ ಮೇಲ್ಮನವಿ ಸಲ್ಲಿಸುವಲ್ಲಿ ಎಷ್ಟು ದಿನಗಳು ತಡವಾಗಿದೆ ಎಂಬ ವಿವರಗಳನ್ನು ಅರ್ಜಿಯಲ್ಲಾಗಲೀ ಅಥವಾ ಮುಖ್ಯ ವಿಚಾರಣೆಯಲ್ಲಾಗಲೀ ನಮೂದಿಸಿಲ್ಲ ಎಂದರೆ ಸರಿ . ಓ ಎಸ್ ನಂ . 17/2018 ರ ದಾವೆ ಡಿಕ್ರಿಯಾದ ನಂತರ ನನ್ನ ಹೆಸರಿಗೆ ಖಾತೆ ಮಾಡಿಸಿಕೊಳ್ಳುವ ಉದ್ದೇಶದಿಂದಲೇ ತಡವಾಗಿ ಬಂದು ಮೇಲ್ಮನವಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಸ್ವತಃ ಮುಂದುವರೆದು ವಾದಿಯು ರಾಜಿ ಮಾಡಿಕೊಳ್ಳುತ್ತೇನೆ ಎಂದು ತಿಳಿಸಿದ್ದರು , ನಂತರ ರಾಜಿಗೆ ಒಪ್ಪಿಕೊಳ್ಳಲಿಲ್ಲ, ಆದುದರಿಂದ ತಡವಾಗಿ ಬಂದು ಮೇಲ್ಮನವಿ ಸಲ್ಲಿಸಿದ್ದೇನೆ ಎಂದು ತಿಳಿಸಿದ್ದಾರೆ .ಯಾವ ದಿನದಂದು ವಾದಿಯು ರಾಜಿ ಮಾಡಿಕೊಳ್ಳುತ್ತೇನೆ ಎಂದು ತಿಳಿಸಿದ್ದರು ಎಂದು ಹೇಳಲು ನೆನಪಾಗುತ್ತಿಲ್ಲ . ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿಯು FDP 4/2021 ರಂತೆ ಅಂತಿಮ ಡಿಕ್ರಿಗಾಗಿ ಅರ್ಜಿ ಸಲ್ಲಿಸಿದ ಸಮಯ ನಾನು ರಾಜಿಯ ಬಗ್ಗೆ ಮಾತನಾಡಲಿಲ್ಲ ಎಂದರೆ ಸರಿಯಲ್ಲ. FDP 4/2021 ರಲ್ಲಿ ವಕೀಲರನ್ನು ನೇಮಿಸಿಕೊಂಡಿದ್ದೇನೆ ಮತ್ತು ನ್ಯಾಯಾಲಯಕ್ಕೆ ಹಾಜರಾಗುತ್ತಿದ್ದೇನೆ ಎಂದರೆ ಸರಿ . ಸದರಿ ಪ್ರಕರಣದಲ್ಲಿ ಸರ್ವೆಯರ್ ಕಮೀಷನ್ ವರದಿ ಸಲ್ಲಿಸಿದ್ದಾರೆ ಎಂದರೆ ನನಗೆ ಗೊತ್ತಿಲ್ಲ . ವಾದಿಗೆ ಭಾಗಾಂಶ ಕೊಡಬೇಕಾಗುತ್ತದೆ ಎಂಬ ಕಾರಣಕ್ಕೆ ನನ್ನ ಮಗನಿಗೆ ದಿಃ 04-07-2024 ರಂದು ದಾನ ಪತ್ರವನ್ನು ಬರೆದುಕೊಟ್ಟಿದ್ದೇನೆ ಎಂದರೆ ದಾನ ಪತ್ರ ಬರೆದುಕೊಟ್ಟಿರುವುದು ನಿಜ ಎಂದು

ಸಾಕ್ಷಿ ಹೇಳಿದ್ದಾರೆ . ವಾದಿಗೆ ಮೋಸ ಮಾಡುವ ಉದ್ದೇಶದಿಂದ ಈ ಮೇಲ್ಮನವಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ದಾವಾ ಸರ್ವೆನಂಬರ್ ಪೋಡಿಯಾಗಿರುವುದು ಮತ್ತು ಖಾತೆ ವರ್ಗಾವಣೆಯಾಗಿರುವುದು ತಿಳಿಸದೆ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ನನ್ನ ಮಗಳು ಆರೋಗ್ಯವಾಗಿದ್ದಾರೆಂದು ದಾನ ಪತ್ರದಲ್ಲಿ ನಮೂದಿಸಿದ್ದೇನೆ , ಆದರೆ ಈಗ ಆಕೆಗೆ ಆನಾರೋಗ್ಯವಿತ್ತು ಎಂದು ವೈದ್ಯಕೀಯ ದಾಖಲೆಗಳನ್ನು ಸೃಷ್ಟಿಸಿದ್ದೇನೆ ಎಂದರೆ ಸರಿಯಲ್ಲ. ನ್ಯಾಯಾಲಯಕ್ಕೆ ಹಾಜರುಪಡಿಸಿರುವ ವೈದ್ಯಕೀಯ ದಾಖಲೆಗಳು ಇತ್ತೀಚಿನ ದಾಖಲೆಗಳು , ದಾವೆ ನಡೆಸಲು ಯಾವುದೇ ತೊಂದರೆ ಇರಲಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓದಿ ಹೇಳಿ, ಕೇಳಿದೆ, ಸರಿ ಇದೆ, ಎಂದರು.

Sd/-
(ಅನುಪಮ.ಡಿ. )
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ, ಗುಬ್ಬಿ .